ಇ) ಪಶುಸಂಗೋಪನಾ ಇಲಾಖೆಯನ್ನು ಯಾವಾಗ ಕೃಷಿ ಇಲಾಖೆಯಿಂದ ಪ್ರತ್ಯೇಕಿಸಲಾಯಿತು ;

ಈ) ಈ ಪಶುಸಂಗೋಪನೆ ಇಲಾಖೆ ಪುನಾರಚನೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಉ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ರೇವೂನಾಯಕ್ ಬೆಳಮಗಿ (ಮಾನ್ಯ ಪಶುಸಂಗೋಪನೆ ಸಚಿವರು) :-

ಅ) 3,28,83,251.

ಆ) 61,68,875.

ಇ) 1945ನೇ ಸಾಲಿನಲ್ಲಿ.

ಈ) ಹೌದು.

ಉ) 2011-12ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಇಲಾಖೆಯ ಪುನರ್ ರಚನೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಪ್ರಸ್ತಾಪಿಸಿದ್ದು. ಈ ಪ್ರಸ್ತಾವನೆ ಪರಿಶೀಲನೆಗಾಗಿ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ 10 ಸದಸ್ಯರನ್ನೊಳಗೊಂಡ ಉನ್ನತಾಧಿಕಾರಿಗಳ ಸಮಿತಿಯನ್ನು ದಿನಾಂಕ : 28-05-2011 ರಂದು ರಚಿಸಲಾಗಿದೆ. ಹಾಗೂ ಇಲಾಖೆಯಿಂದ ಸಲ್ಲಿಸಿದ ಪ್ರಸ್ತಾವನೆಯನ್ನು ಸಮಿತಿಯು ಕೂಲಂಕುಷವಾಗಿ ಪರಿಶೀಲಿಸಿ ಸೆಪ್ಟೆಂಬರ್ 2011 ರಂದು ಶಿಫಾರಸ್ಸಿನೊಂದಿಗೆ ಸಭೆಯ ನಡವಳಿಯನ್ನು ಸರ್ಕಾರಕ್ಕೆ ಮಂಡಿಸಿದೆ. ಪ್ರಸ್ತುತ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಅಂಗನವಾಡಿಗಳಿಗೆ ಸ್ವಂತ ಕಟ್ಟಡ

300 (727) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :- ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಗೌರಿಬಿದನೂರು ತಾಲ್ಲೂಕಿನ ಸುಮಾರು 150 ಅಂಗನವಾಡಿಗಳಿಗೆ ಸ್ವಂತ

ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು ? (ಮಾಹಿತಿ ನೀಡುವುದು)

ಶ್ರೀ ಕಳಕಪ್ಪ ಜಿ. ಬಂಡಿ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :–

ಅ) ಹೌದು.

ಆ) ಗೌರಿಬಿದನೂರು ತಾಲ್ಲೂಕಿನಲ್ಲಿ 349 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, 190 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. 23 ಕಟ್ಟಡಗಳಿಗೆ ಕಾಮಗಾರಿ ಮಂಜೂರಾಗಿದ್ದು, ನಿರ್ಮಾಣ ಹಂತದಲ್ಲಿರುತ್ತದೆ.

2011–12ನೇ ಸಾಲಿನಲ್ಲಿ ಆರ್.ಐ.ಡಿ.ಎಫ್. ಯೋಜನೆಯಡಿ ಒಂದು ಕಟ್ಟಡ ವಿಶೇಷ ಅಭಿವೃದ್ಧಿ ಯೋಜನೆಯಡಿ 5 ಕಟ್ಟಡಗಳನ್ನು ಮಂಜೂರು ಮಾಡಲಾಗಿರುತ್ತದೆ. ಉಳಿದ 130 ಅಂಗನವಾಡಿಗಳಿಗೆ ಸ್ವಂತ ಕಟ್ಟಡ ನಿರ್ಮಿಸಬೇಕಾಗಿದ್ದು, ಅನುದಾನ ಹಾಗೂ ನಿವೇಶನದ ಲಭ್ಯತೆ ಮೇರೆಗೆ ಹಂತಹಂತವಾಗಿ ಕಟ್ಟಡಗಳನ್ನು ನಿರ್ಮಿಸಲಾಗುವುದು.

ಸಂಗೀತ ವಿಶ್ವವಿದ್ಯಾಲಯ ಸ್ಥಾಪನೆ

252 (414) ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು). :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕರ್ನಾಟಕ ಸಂಗೀತ ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಕಳೆದ ಸಾಲಿನಲ್ಲಿ ನಿರ್ಣಯ ಕೈಗೊಂಡಿರುವ ವಿಚಾರ ಸರ್ಕಾರದ ಮುಂದಿದೆಯೇ ; ಬಂದಿದ್ದಲ್ಲಿ ವಿಶ್ವವಿದ್ಯಾಲಯವನ್ನು ಎಲ್ಲಿ ಪ್ರಾರಂಭಿಸಲಾಗುವುದು ;

ಆ) ಸ್ಥಾಪನೆಯ ಪ್ರಕ್ರಿಯೆಯು ಯಾವ ಹಂತದಲ್ಲಿದೆ ? (ವಿವರ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು) :–

ಅ) ಬಂದಿದೆ. ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯವು ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಅಧಿನಿಯಮ 2009ರನ್ವಯ